14	ತರಬೇತಿ ನೀಡುವುದು.
15	• ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕೇಂದ್ರ ಕಛೇರಿಯಲ್ಲಿ ಕಾಗದ–ವಿರಳ (Less Paper)ಆಡಳಿತ ಪದ್ಧತಿಯನ್ನು ಜಾರಿಗೊಳಿಸಲಾಗುವುದು.
16	• ಬೆಂಗಳೂರು ಜಿಲ್ಲೆಯಲ್ಲಿ ಕೆಲಸದ ಒತ್ತಡ ಮತ್ತು ಆದಾಯವನ್ನು ಆಧಾರವಾಗಿಟ್ಟುಕೊಂಡು ನೋಂದಣಿ ಕಛೇರಿಗಳನ್ನು ವಿಲೀನಗೊಳಿಸುವುದು.
17	ಇಲಾಖಾ ಸೇವೆಗಳನ್ನು ಸುಗಮಗೊಳಿಸಲು ಕರ್ನಾಟಕ ಮುದ್ರಾಂಕ ಕಾಯ್ದೆ 1957 ಮತ್ತು ಅದರಡಿಯ ನಿಯಮಾವಳಿಯನ್ನು ಸಮಗ್ರವಾಗಿ ತಿದ್ದುಪಡಿ ಮಾಡುವುದು.

ಕರ್ನಾಟಕ ವಿಧಾನ ಸಭೆ

182 ಶ್ರೀ ಎಂ.ಶ್ರೀನಿವಾಸ

ಅ) ಮಂಡ್ಯ ವಿ.ಸಿ. ನಾಲೆಯ ಎಲ್ಲಾ ಉಪನಾಲೆಗಳು ಹೂಳು ತುಂಬಿ ದುಸ್ಥಿತಿಯಲ್ಲಿದ್ದು, ರೈತರ ಗದ್ದೆಗಳಿಗೆ ನೀರು ಸರಬರಾಜಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ವಿ.ಸಿ. ನಾಲೆಯ ಉಪನಾಲೆಗಳ ಕೆಲವು ಭಾಗಗಳಲ್ಲಿ ಮಾತ್ರ ಹೂಳು ತುಂಬಿರುವುದು ಗಮನಕ್ಕೆ ಬಂದಿರುತ್ತದೆ. ಇದರಿಂದ ರೈತರುಗಳ ಜಮೀನುಗಳಿಗೆ ನೀರು ಹರಿಸುವಲ್ಲಿ ತೊಂದರೆಯಾಗಿರುವುದಿಲ್ಲ.

ಆ) ಹಾಗಿದ್ದಲ್ಲಿ, ಈ ನಾಲೆಗಳನ್ನು ದುರಸ್ಥಿಗೊಳಿಸಿ ಹೂಳು ತೆಗೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (NREGA) ಅಡಿಯಲ್ಲಿ ನಾಲೆಗಳಲ್ಲಿ ಹೂಳು ಮತ್ತು ಗಿಡಗಂಟೆಗಳನ್ನು ತೆಗೆಯುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿದ್ದು, ಕಾವೇರಿ ನೀರಾವರಿ ನಿಗಮದಿಂದ ಸದರಿ ನಾಲೆಗಳಲ್ಲಿ ಹೂಳೆತ್ತುವ ಮತ್ತು ಜಂಗಲ್ ತೆಗೆಯುವ ರೂ.392.77 ಲಕ್ಷಗಳ ಮೊತ್ತದ 515 ಕಾಮಗಾರಿಗಳಿಗೆ ಅಂದಾಜುಗಳನ್ನು ತಯಾರಿಸಿ, ತಾಂತ್ರಿಕ ಮಂಜೂರಾತಿ ನೀಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಂಬಂಧಪಟ್ಟ ಗ್ರಾಮ ಪಂಚಾಯ್ತಿಗಳಿಗೆ ಕಳುಹಿಸಲಾಗಿದೆ. ಪ್ರಸ್ತುತ ವರ್ಷ ಸದರಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುವುದು.

ಉಳಿದ ಕಾರ್ಯ ಕಾಮಗಾರಿಗಳನ್ನು ಇಲಾಖೆಯ ನಿರ್ವಹಣಾ ಕಾಮಗಾರಿಗಳ ಅಡಿಯಲ್ಲಿ 2009–10ನೇ ಸಾಲಿನಲ್ಲಿ ಕಾವೇರಿ ನೀರಾವರಿ ನಿಗಮಕ್ಕೆ ಒದಗಿಸಲಾದ ಅನುದಾನದ ಲಭ್ಯತೆಗನುಗುಣವಾಗಿ ಕೈಗೆತ್ತಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

ಇ) ಹಾಗಿದ್ದಲ್ಲಿ, ಹೂಳು ತೆಗೆಸುವ ಕಾಮಗಾರಿಗೆ ಸರ್ಕಾರ ಕೂಡಲೇ ಹಣ ಬಿಡುಗಡೆ ಮಾಡುವುದೇ?

ನಾಲೆಗಳಲ್ಲಿ ಹೂಳು ತೆಗೆಯುವ ಕಾಮಗಾರಿಗಳಿಗೆ ಅವಶ್ಯಕತೆಗೆ ಅನುಗುಣವಾಗಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (NREGA) ಅಡಿಯಲ್ಲಿ ಸೂಕ್ತ ಅನುದಾನ ಬಿಡುಗಡೆ ಮಾಡಲಾಗುವುದು.

ಉಳಿದ ತುರ್ತು ಕಾಮಗಾರಿಗಳನ್ನು 2009–10ನೇ ಸಾಲಿನಲ್ಲಿ ಕಾವೇರಿ ನೀರಾವರಿ ನಿಗಮಕ್ಕೆ ಒದಗಿಸಲಾಗಿರುವ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

185 ಶ್ರೀ ಎಂ.ಶ್ರೀನಿವಾಸ

ಅ) ಮಂಡ್ಯ ತಾಲ್ಲೂಕು ಕಸಬಾ ಹೋಬಳಿ, ಕನ್ನಲಿ ಗ್ರಾಮದ ಕೆರೆಗೆ ಯಾವ ವರ್ಷದಲ್ಲಿ ಏತ ನೀರಾವರಿ ಯೋಜನೆಯನ್ನು ಮಂಜೂರು ಮಾಡಲಾಗಿದೆ.

ಮಂಡ್ಯ ತಾಲ್ಲೂಕು ಕಸಬಾ ಹೋಬಳಿಯ ಕನ್ನಲಿ ಗ್ರಾಮದ ಕೆರೆಯಿಂದ ನೀರೆತ್ತಿ ಹೊಸ ಮದ್ದೂರು ಶಾಖಾ ನಾಲೆಗೆ ಹರಿಸುವ ಕನ್ನಲಿ ಏತ ನೀರಾವರಿ ಯೋಜನೆ ಮತ್ತು ಹುಚ್ಚಲಗೆರೆ ಏ.ನೀ.ಯೋ.ಎಂಬ ಎರಡು ಯೋಜನೆಗಳನ್ನು 1994–95 ರಲ್ಲಿ ಮಂಜೂರು ಮಾಡಲಾಗಿದೆ.

ಆ) ಈ ಯೋಜನೆಗೆ ಸರ್ಕಾರ ಈವರೆವಿಗೂ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು (ವಿವರಗಳನ್ನು ನೀಡುವುದು);

ಈ ಎರಡು ಏತ ನೀರಾವರಿ ಯೋಜನೆಗಳಿಗೆ ಪ್ರಾರಂಭದಿಂದ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನದ ಒಟ್ಟು ಮೊತ್ತ ಈ ರೀತಿ ಇದೆ.

1. ಕನ್ನಲಿ ಏತ ನೀರಾವರಿ ಯೋಜನೆ – ರೂ.39.08 ಲಕ್ಷ
2. ಹುಚ್ಚಲಗೆರೆ ಏತ ನೀರಾವರಿ ಯೋಜನೆ – ರೂ.39.41 ಲಕ್ಷ

ಇ) ಹಾಗಿದ್ದಲ್ಲಿ, ಈವರೆವಿಗೂ ಕಾಮಗಾರಿ ಪೂರ್ಣವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ ಏತ ನೀರಾವರಿ ಯೋಜನೆಗಳ ಕಾಮಗಾರಿಗಳು ಇದುವರೆಗೆ ಪೂರ್ಣಗೊಂಡಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆ.

ಈ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು; ಇದರ ಗುತ್ತಿಗೆದಾರರು ಯಾರು; (ವಿವರಗಳನ್ನು ನೀಡುವುದು);

ಎರಡೂ ಯೋಜನೆಗಳಲ್ಲಿ ವಿಳಂಬಕ್ಕೆ ಕಾರಣಗಳು:

1. ರೈಸಿಂಗ್ ಮೈನ್‌ಗೆ ಅಳವಡಿಸಬೇಕಾದ ಪೈಪ್‌ಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳುವಲ್ಲಿ ಆಗಿರುವ ವಿಳಂಬ